

ಅರುಣ ಪಿ. ಭಟ್ಟ

## ವಾರಭವಿಷ್ಯ: 23.04.2026ರಿಂದ 29.04.2026ರವರೆಗೆ




ನಿಮ್ಮ ಬೌದ್ಧಿಕ ಶಕ್ತಿಯಿಂದ ವಿಶೇಷ ಗೌರವಕ್ಕೆ ಪಾತ್ರರಾಗುತ್ತೀರಿ. ಕ್ರೀಡಾ ಕ್ಷೇತ್ರದಲ್ಲಿ ಉತ್ತಮ ಸ್ಥಾನಮಾನ ಪಡೆಯಲಿದ್ದೀರಿ. ಮಕ್ಕಳು ಯಶಸ್ಸು ಪಡೆಯಲು ಪ್ರೋತ್ಸಾಹ ನೀಡಲಿದ್ದೀರಿ. ಹಣಕಾಸು ವಿಚಾರದಲ್ಲಿ ಪ್ರಗತಿ ಇದೆ. ಸಾಲ ಮರುಪಾವತಿಗೆ ಸಮಸ್ಯೆಗಳು ಎದುರಾಗಬಹುದು. ಪ್ರತಿಸ್ಪರ್ಧಿಗಳು ನಿಮ್ಮನ್ನು ಮಣಿಸಲು ಬಹಳ ಶ್ರಮಿಸುತ್ತಾರೆ. ಶುಭದಿನ: 24. ಶ್ರೀರಾಮರಕ್ಷಾ ಸ್ತೋತ್ರ ಪಠಿಸಿರಿ.




ಜೀವನಮಟ್ಟ ಮೇಲಕ್ಕೆ ಏರಲಿದೆ. ವಿಲಾಸಿ ವಸ್ತುಗಳನ್ನು ಖರೀದಿಸುವ ಯೋಗ ಇದೆ. ಚೈತನ್ಯ, ದೈಹಿಕ ಕ್ಷಮತೆ ಹೆಚ್ಚಾಗಲಿದೆ. ದೈನಂದಿನ ಚಟುವಟಿಕೆಗಳನ್ನು ಇನ್ನಷ್ಟು ಉತ್ಸಾಹದಿಂದ ಮಾಡಲಿದ್ದೀರಿ. ವೈವಾಹಿಕ ಜೀವನದ ಕಡೆಗೆ ಹೆಚ್ಚು ಲಕ್ಷ್ಯ ನೀಡಿ. ಸಂಗಾತಿಗೆ ಸ್ಪಂದಿಸಿ. ಸಂತೋಷದಿಂದ ಸಮಯ ಕಳೆಯಲಿದ್ದೀರಿ. ಪ್ರತಿಸ್ಪರ್ಧಿಗಳ ವಿರುದ್ಧ ನಿಮ್ಮ ಕೈ ಮೇಲಾಗಲಿದೆ. ಶುಭದಿನ: 25. ಸೌಂದರ್ಯ ಲಹರಿ ಪಠಿಸಿರಿ.




ವ್ಯಾಪಾರದಲ್ಲಿ ನಿಮ್ಮ ಹಿಡಿತ ಗಟ್ಟಿಯಾಗಲಿದೆ. ಆತ್ಮವಿಶ್ವಾಸ ಹೆಚ್ಚಾಗಲಿದೆ. ಭಿನ್ನಾಭಿಪ್ರಾಯಗಳು ಬಗೆಹರಿಯಲಿವೆ. ಈ ವಾರ ನಿಮ್ಮ ಪಾಲಿಗೆ ಅದೃಷ್ಟ ಕೈ ಹಿಡಿಯಲಿದೆ. ಉದ್ಯೋಗ ವ್ಯಾಪಾರದಲ್ಲಿ ನಿಮ್ಮ ಸ್ಥಿತಿ ಉತ್ತಮವಾಗಿರುತ್ತದೆ. ಪೋಷಕರ ಸಂತೋಷಕ್ಕಾಗಿ ಅವರ ಅಗತ್ಯಗಳನ್ನು ಪೂರೈಸಲಿದ್ದೀರಿ. ವೈವಾಹಿಕ ಜೀವನದ ಸಂತೋಷಕ್ಕಾಗಿ ಪ್ರಯತ್ನಿಸಲಿದ್ದೀರಿ. ಶುಭದಿನ: 26. ಲಕ್ಷ್ಮೀನರಸಿಂಹ ಜಪ ಮಾಡಿರಿ.




ಆಸ್ತಿ ವ್ಯವಹಾರಗಳಲ್ಲಿ ಪ್ರಗತಿ ಕಾಣಿಸಿಕೊಳ್ಳಲಿದೆ. ಕಿರುಪ್ರವಾಸ ಕೈಗೊಳ್ಳುವ ಯೋಗ ಇದೆ. ನಿಮ್ಮ ಧೈರ್ಯ ಹೆಚ್ಚಾಗಲಿದೆ. ಸಾಮಾಜಿಕ ಕಾರ್ಯಕ್ರಮಗಳಲ್ಲಿ ಆಸಕ್ತಿ ಹೆಚ್ಚಾಗಲಿದೆ. ಸ್ಪರ್ಧಾತ್ಮಕ ಕ್ಷೇತ್ರದಲ್ಲಿ ಇರುವವರಿಗೆ ಗುರಿ ಮುಟ್ಟಲು ಸೂಕ್ತ ಅವಕಾಶ ದೊರೆಯಲಿದೆ. ಸಣ್ಣ ಪುಟ್ಟ ಆರೋಗ್ಯ ಸಮಸ್ಯೆಗಳು ಕಾಡಬಹುದು. ಉದ್ಯೋಗ ಸ್ಥಳದಲ್ಲಿ ಒತ್ತಡ ಹೆಚ್ಚಾಗಬಹುದು. ಶುಭದಿನ: 28. ವಿಷ್ಣು ಸಹಸ್ರನಾಮ ಪಠಿಸಿರಿ.




ಉದ್ಯೋಗ ಹಾಗೂ ವ್ಯಾಪಾರದಲ್ಲಿ ಯಶಸ್ಸು ಪಡೆಯಲಿದ್ದೀರಿ. ಕೌಟುಂಬಿಕ ವಿಷಯಗಳಲ್ಲಿ ಮುಖ್ಯ ತೀರ್ಮಾನ ಮಾಡಲಿದ್ದೀರಿ. ನಷ್ಟವನ್ನು ಮತ್ತೆ ಭರಿಸಲು ಎಲ್ಲ ಪ್ರಯತ್ನವನ್ನು ಮಾಡಲಿದ್ದೀರಿ. ಮಕ್ಕಳ ಜತೆಗೆ ಉತ್ತಮ ಸಮಯ ಕಳೆಯಲಿದ್ದೀರಿ. ಸಮಾಜದಲ್ಲಿ ಉತ್ತಮ ಹೆಸರು ಪಡೆಯಲಿದ್ದೀರಿ. ಆಶಾದಾಯಕವಾದ ಫಲಿತಾಂಶಗಳು ದೊರೆಯಲಿವೆ. ಶುಭದಿನ: 29. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.




ಪೋಷಕರ ಜತೆಗೆ ಬಾಂಧವ್ಯ ಗಟ್ಟಿಯಾಗಲಿದೆ. ಆಸ್ತಿ ವ್ಯವಹಾರದಲ್ಲಿ ಪ್ರಗತಿ ಕಾಣಲಿದೆ. ಸ್ಥಿರವಾದ ಆರೋಗ್ಯ ಕಾಪಾಡಿಕೊಳ್ಳುವುದು ಸವಾಲಾಗಿ ಪರಿಣಮಿಸಲಿದೆ. ಕಾನೂನು ವ್ಯಾಜ್ಯಗಳು ನಡೆಯುತ್ತಿದ್ದಲ್ಲಿ ಪ್ರತಿಸ್ಪರ್ಧಿಗಳ ವಿರುದ್ಧ ನಿಮ್ಮ ಕೈ ಮೇಲಾಗಲಿದೆ. ಪ್ರೀತಿ ಪ್ರೇಮದಲ್ಲಿ ಇರುವವರು ಸಂಗಾತಿಯ ಸಿಟ್ಟನ್ನು ಸಹಿಸಬೇಕಾಗುತ್ತದೆ. ನಿಮ್ಮ ಖರ್ಚಿನ ಮೇಲೆ ಹಿಡಿತ ಇರಲಿ. ಶುಭದಿನ: 27. ವೆಂಕಟೇಶ್ವರ ಸ್ತೋತ್ರ ಪಠಿಸಿರಿ.




ಹಣಕಾಸು ಲಾಭ ಗಳಿಸುವ ಯೋಗ ಇದೆ. ಬೌದ್ಧಿಕ ಸಾಮರ್ಥ್ಯ ವೃದ್ಧಿ ಆಗಲಿದೆ. ಸಹೋದ್ಯೋಗಿಗಳ ಜತೆ ಉತ್ತಮ ಬಾಂಧವ್ಯ ಇರಲಿದೆ. ಶೈಕ್ಷಣಿಕ ಕ್ಷೇತ್ರದಲ್ಲಿ ಪ್ರಗತಿ ಕಾಣಲಿದ್ದೀರಿ. ಆದರೆ ಅದಕ್ಕಾಗಿ ಪ್ರಾಮಾಣಿಕ ಪ್ರಯತ್ನವನ್ನು ಮಾಡಬೇಕು. ಖರ್ಚಿನ ಪ್ರಮಾಣ ಹೆಚ್ಚಾಗಲಿದೆ. ನಿಮ್ಮ ವರ್ಚಸ್ಸಿಗೆ ಧಕ್ಕೆ ತರುವುದಕ್ಕೆ ವಿರೋಧಿಗಳು ಪ್ರಯತ್ನಪಡಬಹುದು. ಶುಭದಿನ: 26. ಚಂಡಿ ಪಾರಾಯಣ ಮಾಡಿರಿ.




ಉದ್ಯೋಗ ಸ್ಥಳದಲ್ಲಿ ನಿಮಗೆ ಅನುಕೂಲಕರ ಸನ್ನಿವೇಶ ಇರಲಿದೆ. ದೈಹಿಕ ಕ್ಷಮತೆ ಉತ್ತಮವಾಗಿರುತ್ತದೆ. ಆರೋಗ್ಯ ಸಮಸ್ಯೆಗಳು ಇದ್ದಲ್ಲಿ ನಿವಾರಣೆ ಆಗುತ್ತವೆ. ಸಮಾಜದಲ್ಲಿ ಪ್ರಭಾವಿಗಳಾಗಿ ಹೊರಹೊಮ್ಮಲಿದ್ದೀರಿ. ಲಾಭದ ಪ್ರಮಾಣ ಹೆಚ್ಚಾಗಲಿದೆ. ವಿದ್ಯಾರ್ಥಿಗಳಿಗೆ ಶೈಕ್ಷಣಿಕ ವಿಚಾರದಲ್ಲಿ ಪ್ರಗತಿ ಇದೆ. ಗುರಿ ತಲುಪುವ ನಿಟ್ಟಿನಲ್ಲಿ ಆಲಸ್ಯವನ್ನು ಬಿಡಬೇಕಾಗುತ್ತದೆ. ಶುಭದಿನ: 25. ದತ್ತಗುರು ಚರಿತ್ರೆ ಪಠಿಸಿರಿ.




ಈ ಅವಧಿಯಲ್ಲಿ ಅದೃಷ್ಟ ನಿಮ್ಮ ಪಾಲಿಗೆ ಇರಲಿದೆ. ರಾಜಕೀಯ ಕ್ಷೇತ್ರದಲ್ಲಿ ಇರುವವರಿಗೆ ಪ್ರಗತಿ. ಆರೋಗ್ಯ ಉತ್ತಮವಾಗಿರುತ್ತದೆ. ಅನುಭವಿಗಳ ಮಾರ್ಗದರ್ಶನದಿಂದ ಹೊಸ ಕೌಶಲ ಕಲಿಯಲು ಸಾಧ್ಯವಾಗುತ್ತದೆ. ತಾತ್ಕಾಲಿಕ ಉದ್ಯೋಗ ಮಾಡುತ್ತಿರುವವರಿಗೆ ಕಾಯಂ ಆಗುವ ಯೋಗ ಇದೆ. ಮಕ್ಕಳ ಪ್ರಗತಿಯಿಂದ ಮನಸಿಗೆ ಸಂತೋಷವಾಗುತ್ತದೆ. ಶುಭದಿನ: 24. ಲಲಿತಾ ಸಹಸ್ರನಾಮ ಪಠಿಸಿರಿ.




ಹೂಡಿಕೆ ವಿದೇಶ ವ್ಯವಹಾರಗಳು ಲಾಭದಾಯಕ ಆಗಿರಲಿದೆ. ಕಾನೂನು ವ್ಯವಹಾರಗಳಲ್ಲಿ ನಿಮ್ಮ ಕೈ ಮೇಲಾಗಲಿದೆ. ಪ್ರತಿಸ್ಪರ್ಧಿಗಳು ನಿಮಗೆ ಸವಾಲೊಡ್ಡಬಹುದು. ಈ ಬಗ್ಗೆ ಎಚ್ಚರಿಕೆಯಿಂದ ಇರಬೇಕು. ದೊಡ್ಡ ಸಂಸ್ಥೆಗಳ ಜತೆಗೆ ಒಪ್ಪಂದಕ್ಕೆ ಬರುವ ಅವಕಾಶಗಳು ಇವೆ. ನಿಮ್ಮ ಶ್ರಮಕ್ಕೆ ಈಗ ಮಾನ್ಯತೆ ದೊರೆಯಲಿದೆ. ಸಕಾರಾತ್ಮಕವಾದ ಬೆಳವಣಿಗೆ ಕಾಣಲಿದ್ದೀರಿ. ಶುಭದಿನ: 26. ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ಸಂಗಾತಿ ಜತೆಗೆ ಸಂಬಂಧ ಗಾಢವಾಗಲಿದೆ. ಕೊಟ್ಟ ಮಾತಿನಂತೆ ನಡೆದುಕೊಳ್ಳಲಿದ್ದೀರಿ. ಸಮಾಜದ ಪ್ರಮುಖರು ನಿಮ್ಮ ಕಠಿಣ ಪರಿಶ್ರಮವನ್ನು ಗುರುತಿಸಲಿದ್ದಾರೆ. ಮುಖ್ಯ ಹುದ್ದೆಯಲ್ಲಿ ಇರುವವರಿಗೆ ಹಿಡಿತ ಗಟ್ಟಿ ಮಾಡಿಕೊಳ್ಳಲು ಅವಕಾಶ ದೊರೆಯಲಿದೆ. ಮಕ್ಕಳ ನಿರ್ಧಾರದಂತೆ ನಡೆದುಕೊಳ್ಳಲು ಹೆಚ್ಚಿನ ಸಮಯ ಮೀಸಲಿಡಲಿದ್ದೀರಿ. ಶುಭದಿನ: 28. ಲಕ್ಷ್ಮಿ ಕನಕಧಾರಾ ಸ್ತೋತ್ರ ಪಠಿಸಿರಿ.




ಸೋದರ ಸಂಬಂಧಿಗಳ ಜತೆಗೆ ಬಾಂಧವ್ಯ ಗಟ್ಟಿಯಾಗಲಿದೆ. ವೃತ್ತಿಪರ ಕಾರಣಗಳಿಗಾಗಿ ಪ್ರಯಾಣ ಮಾಡಬೇಕಾಗುತ್ತದೆ. ನಿಮ್ಮ ಪ್ರಗತಿಗೆ ಅಡ್ಡಗಾಲು ಹಾಕುತ್ತಾರೆ. ವೈವಾಹಿಕ ಜೀವನ ಸಂತುಷ್ಟವಾಗಿರುತ್ತದೆ. ಕ್ರಿಯೇಟಿವ್ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುವವರಿಗೆ ಪ್ರಗತಿ ಇದೆ. ಕಾನೂನು ವ್ಯಾಜ್ಯಗಳು ನಡೆಯುತ್ತಿದ್ದಲ್ಲಿ ಅಗತ್ಯ ದಾಖಲೆ ಪತ್ರಗಳನ್ನು ಜೋಪಾನವಾಗಿ ಇಟ್ಟುಕೊಳ್ಳಿ. ಶುಭದಿನ: 25. ಶಿವಕವಚ ಪಠಿಸಿರಿ.